# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 229 |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 06.03.2024 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೊಮ್ಮನಹಳ್ಳಿ ಜಂಕ್ಷನ್ ಮತ್ತು ಗಾರೇಬಾವಿಪಾಳ್ಯ ಜಂಕ್ಷನ್ ನಡುವೆ ಖಾಸಗಿ ಬಿಲ್ಡರ್‌ರವರ ವಸತಿ ಸಮುಚ್ಛಯ ಇದೆ ಎನ್ನುವ ಕಾರಣಕ್ಕಾಗಿ ಸದರಿ ವಸತಿ ಸಮುಚ್ಛಯದ ಮುಖ್ಯದ್ವಾರಕ್ಕೆ ಅನುಕೂಲ ಮಾಡಿ ಕೊಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯ ಅಧಿಕಾರಿಗಳು ದಿನಾಂಕ:16.09.2021ರ ರಾತ್ರಿ ಅಕ್ರಮವಾಗಿ ಪಿಲ್ಲರ್ ಸಂಖ್ಯೆ 20 ಮತ್ತು 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಾಜಕಗಳನ್ನು ತೆರವುಗೊಳಿಸಿರುವುದರ ಕುರಿತು ಸರ್ಕಾರದ ನಿಲುವೇನು; | ದಿನಾಂಕ: 03.04.2019 ರಂದು ರಸ್ತೆ ಸುರಕ್ಷತಾ ಸಮಿತಿಯ ಅಧಿಕಾರಿಗಳ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಪಿಲ್ಲರ್ ಸಂಖ್ಯೆ: 4 & 5ರ ನಡುವೆ ಉಂಟಾಗುತ್ತಿದ್ದ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ಪಿಲ್ಲರ್ ಸಂಖ್ಯೆ: 20 & 21ರ ನಡುವಿನ ರಸ್ತೆ ವಿಭಜಕಗಳನ್ನು ತೆರವುಗೊಳಿಸಲು ನಿರ್ಧರಿಸಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ತೆರವುಗೊಳಿಸಲಾಗಿರುತ್ತದೆ.<br><br>ರಾಷ್ಟ್ರೀಯ ಹೆದ್ದಾರಿ–7ರ ನಡುವಿನ ರಸ್ತೆ ವಿಭಜಕಗಳನ್ನು ಪೊಲೀಸ್ ಇಲಾಖೆಯಿಂದ ತೆರವುಗೊಳಿಸಿರುವುದಿಲ್ಲ. |
| ಆ) | ಈ ರೀತಿ ಅಕ್ರಮವಾಗಿ ರಸ್ತೆ ವಿಭಾಜಕಗಳನ್ನು ತೆರವುಗೊಳಿಸಿದ ಇಲಾಖೆಯ ಅಧಿಕಾರಿಗಳ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು). | ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ. |

ಹೆಚ್‌ಡಿ 89 ಎಸ್‌ಎಸ್‌ಟಿ 2025

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು